# ಸಹಾಯಕ ಆಯುಕ್ತರ ನ್ಯಾಯಾಲಯ, ಬಳ್ಳಾರಿ

ಸಂ: ಕಂದಾಯ/ಅಪೀಲು/155/15-16

ದಿನಾಂಕ :05-08-2016

ಉಪಸ್ಥಿತರು: **ಶ್ರೀ ಲೋಕೇಶ್ ಪಿ.ಎನ್** (ಕ.ಆ.ಸೇ)

**ಸಹಾಯಕ ಆಯುಕ್ತರು, ಬಳ್ಳಾರಿ.**

| ವಾದಿಗಳು | ಪ್ರತಿವಾದಿಗಳು |
|---|---|
| ಶ್ರೀ ಗಡ್ಡಂ ರಾಮಪ್ಪ ತಂದೆ ಬಸಪ್ಪ,<br>ಸಾ\|\|ಯರ್ರಗುಡಿ ಗ್ರಾಮ, ತಾ\|\|ಬಳ್ಳಾರಿ<br><br>**ಶ್ರೀ ಡಿ ನಾರಾಯಣ, ವಕೀಲರು, ಬಳ್ಳಾರಿ** | 1. ತಹಶೀಲ್ದಾರರು, ಬಳ್ಳಾರಿ<br>2. ಕಂದಾಯ ನಿರೀಕ್ಷಕರು, ಮೋಕ<br>3. ಗ್ರಾಮ ಲೆಕ್ಕಾಧಿಕಾರಿಗಳು, ಸಿಂಧುವಾಳ<br>4. ಶ್ರೀ ರಾಮಣ್ಣ ತಂದೆ ಲೇಟ್ ಸಿರಿಗೇರಪ್ಪ<br>5. ಶ್ರೀ ದೊಡ್ಡಬಜ್ಜಪ್ಪ ತಂದೆ ಲೇಟ್ ದೊಡ್ಡ ಈರಣ್ಣ,<br>ಸಾ\|\|ಯರ್ರಗುಡಿ ಗ್ರಾಮ, ತಾ\|\|ಬಳ್ಳಾರಿ |

**ದಾವಾ ಜಮೀನಿನ ವಿವರ :-**

| ತಾಲ್ಲೂಕು | ಗ್ರಾಮ | ಸ. ನಂ. | ವಿಸ್ತೀರ್ಣ (ಎಕರೆಗಳಲ್ಲಿ) |
|---|---|---|---|
| ಬಳ್ಳಾರಿ | ಸಿಂಧುವಾಳ | 413/B | 1.06 |

--@@@--

ವಾದಿಯು ಅವರ ವಕೀಲರ ಮುಖಾಂತರ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(2) ರಡಿಯಲ್ಲಿ ಕಂದಾಯ ನಿರೀಕ್ಷಕರು, ಮೋಕ ಇವರ ಎಂ.ಆರ್ ನಂ 39/1997-98 ದಿನಾಂಕ: 02.02.1998 ಆದೇಶದ ವಿರುದ್ಧ ಈ ನ್ಯಾಯಾಲಯಕ್ಕೆ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯನ್ನು ಸಲ್ಲಿಸುವಲ್ಲಿ ಆದ ವಿಳಂಬಕ್ಕೆ ಕಾಲಮಿತಿ ಕಾಯ್ದೆಯಡಿ ವಿಳಂಬ ಮನ್ನಾಕ್ಕೆ ಅರ್ಜಿ ಸಲ್ಲಿಸಿರುತ್ತಾರೆ. ವಿಳಂಬ ಮನ್ನಾ ಮಾಡಿ ಪ್ರಕರಣವನ್ನು ದಾಖಲಿಸಿಕೊಳ್ಳಲಾಗಿರುತ್ತದೆ. ನೈಸರ್ಗಿಕ ನ್ಯಾಯ ದೃಷ್ಠಿಯಿಂದ ಉಭಯ ಪಕ್ಷಗಾರರಿಗೂ ನೋಟೀಸಗಳನ್ನು ಕಳುಹಿಸಿ ದಿನಾಂಕ: 05-08-2016 ರಂದು ಪ್ರಕರಣದ ವಿಚಾರಣೆಯನ್ನು ಕೈಗೊಳ್ಳಲಾಗಿರುತ್ತದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಾದಿಗಳು ಅವರ ವಕೀಲರು ಮುಖಾಂತರ ದಿನಾಂಕ: 05-08-2016 ರಂದು ಈ ನ್ಯಾಯಾಲಯಕ್ಕೆ ಹಾಜರಾಗಿ, ಬಳ್ಳಾರಿ ತಾಲ್ಲೂಕಿನ ಸಿಂಧುವಾಳ ಗ್ರಾಮದ ಸ.ನಂ 413/B ವಿಸ್ತೀರ್ಣ: 1.06 ಎಕರೆ ಜಮೀನಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು, ಮೋಕ ಇವರ ಪಕ್ಕಾ ಬದಲಾವಣೆ ಆದೇಶ ಎಂ.ಆರ್ ನಂ 39/1997-98 ನ್ನು ಪ್ರಶ್ನಿಸಿರುವುದನ್ನು ಪರಿಶೀಲಿಸಲಾಗಿ , ಪ್ರಕರಣವು ಪಹಣಿ ತಿದ್ದುಪಡಿ ವ್ಯಾಪ್ತಿಗೆ ಸಂಬಂಧಿಸಿದ್ದಾಗಿದ್ದು ಕಂಡು ಬಂದಿರುತ್ತದೆ. ಕಾರಣ ಬಳ್ಳಾರಿ ತಾಲ್ಲೂಕಿನ ಸಿಂಧುವಾಳ ಗ್ರಾಮದ ಸ.ನಂ 413/B ವಿಸ್ತೀರ್ಣ: 1.06 ಎಕರೆ ಜಮೀನಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಆದೇಶಿಸಲಾಗಿದೆ.

**:: ಆದೇಶ ::**

ಪೀಠಿಕೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಬಳ್ಳಾರಿ ತಾಲ್ಲೂಕಿನ ಸಿಂಧುವಾಳ ಗ್ರಾಮದ ಸ.ನಂ 413/B ವಿಸ್ತೀರ್ಣ: 1.06 ಎಕರೆ ಜಮೀನಿಗೆ ಸಂಬಂಧಿಸಿದಂತೆ ಮೇಲ್ಮನವಿದಾರರಿಂದ ಅಗತ್ಯ ದಾಖಲೆಗಳನ್ನು ಪಡೆದು ಸೂಕ್ತ ತಿದ್ದುಪಡಿ ಪ್ರಸ್ತಾವನೆ ತಯಾರಿಸಿ ಈ ಪ್ರಾಧಿಕಾರದ ಅನುಮೋದನೆ ಪಡೆಯಲು ತಹಶೀಲ್ದಾರರು ಬಳ್ಳಾರಿ ಇವರಿಗೆ ಆದೇಶಿಸಿದೆ.

ಈ ಆದೇಶವನ್ನು ಹೇಳಿ, ಬರೆಯಿಸಿ, ತಪ್ಪುಗಳನ್ನು ತಿದ್ದಿ **ದಿನಾಂಕ: 05-08-2016** ರಂದು ಬಹಿರಂಗ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

ಸಹಾಯಕ ಆಯುಕ್ತರು,
ಬಳ್ಳಾರಿ.

**ಪ್ರತಿಯನ್ನು ವಾದಿ ಮತ್ತು ಪ್ರತಿವಾದಿಗಳಿಗೆ ಹಾಗೂ ತಹಶೀಲ್ದಾರರು ಬಳ್ಳಾರಿ ಇವರಿಗೆ ಸೂಕ್ತ ಕ್ರಮಕ್ಕಾಗಿ**